# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 314/2024

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 1. ಚೌಡಯ್ಯ,
ಬಿನ್ ಲೇಟ್ ಸಿದ್ದಯ್ಯ @ ಪತ್ರಯ್ಯ, 30 ವರ್ಷ,

2. ಭೈರವ ಬಿನ್ ಪರಶಿವಮೂರ್ತಿ, 22 ವರ್ಷ,

ಇಬ್ಬರ ವಾಸಃ ಜೈ ಭೀಮ್ ನಗರ,
1 ನೇ ಹಂತ, ಬನ್ನೂರು ಟೌನ್,
ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 05.05.2023 ರಂದು ಸಮಯ ಸಂಜೆ 4.45 ಗಂಟೆಗೆ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ಬನ್ನೂರು ಪಟ್ಟಣದ ಜೈಭೀಮ್ ನಗರದ 1 ನೇ ಹಂತದಲ್ಲಿ ವಾಸವಾಗಿರುವ ಚಾಸಾ-1 ದೇವರಾಜುರವರ ಮನೆಯ ಮುಂದೆ ಆರೋಪಿತರಾದ ನೀವು ಸಮಾನ ಉದ್ದೇಶ ಹೊಂದಿ ಕುಡಿದು ನಿಂತುಕೊಂಡು ಚಾಸಾ-1 ರವರನ್ನು ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ಸಹವಾಚಕ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಚಾಸಾ-1ರವರು ಏಕೆ ಬೈಯುತ್ತಿದ್ದೀರಾ ಎಂದು ಕೇಳಿದ್ದಕ್ಕೆ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಅವರ ಪೈಕಿ 1 ನೇ ಆರೋಪಿಯಾದ ನೀವು ರಸ್ತೆಯ ಪಕ್ಕದಲ್ಲಿ ಬಿದ್ದಿದ್ದ ಕಲ್ಲನ್ನು ಎತ್ತಿಕೊಂಡು ಚಾಸಾ-1ರವರ ಮುಖಕ್ಕೆ ಹೊಡೆದು ಅವರ ಮೇಲ್ಭಾಗದ ತುಟಿಗೆ, ಹಲ್ಲಿಗೆ ತೀವ್ರ ತರಹದ ಗಾಯವಾಗಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.326 ಸಹವಾಚಕ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಅವರ ಪೈಕಿ 2 ನೇ ಆರೋಪಿಯಾದ ನೀವು ಜಗಳ ಬಿಡಿಸಲು ಬಂದ ಚಾಸಾ-2 ಹೇಮಂತ್ ಕುಮಾರ್ ರವರಿಗೆ ಕಲ್ಲನ್ನು ತೆಗೆದುಕೊಂಡು ತಲೆಗೆ ಮತ್ತು ಹಣೆಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.324 ಸಹವಾಚಕ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ 02.04.2026.

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿತರ ಸಹಿ**

1 ನೇ ಆರೋಪಿಃ

2 ನೇ ಆರೋಪಿಃ